## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಸರ್ಕಾರದ ಎಲ್ಲಾ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳು e-PAR Application Window ನಲ್ಲಿ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ದಾಖಲಿಸುವ ಕುರಿತು.

**ಓದಲಾಗಿದೆ:**

1. ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 11 ಸೇನಿಸಿ 92, ದಿನಾಂಕ :26.04.1994.
2. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತುಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಇವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ 03.12.2025 ರ ಸಭಾ ನಡವಳಿಗಳು
3. ಅನಧಿಕೃತ ಟಿಪ್ಪಣಿ ಸಂಖ್ಯೆ:.ಸಿಆಸುಇ 69 ಪಿಎಂಎಸ್ 2025, ದಿನಾಂಕ: 08.04.2026.
4. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಹಿಂಬರಹ ಸಂಖ್ಯೆ: ಸಿಆಸುಇ 31 ಸೇನಿಸಿ 2020, ದಿನಾಂಕ:17.06.2026.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕಂದಾಯ ಇಲಾಖೆ ರವರ ಅ.ಸ.ಪತ್ರ ಸಂಖ್ಯೆ:ಆರ್‌ಡಿ 89 ಆರ್‌ಎಂಇ 2025, ದಿನಾಂಕ:24.07.2026.

**ಪ್ರಸ್ತಾವನೆ**:

ಮೇಲೆ ಓದಲಾದ ಅಧಿಕೃತ ಜ್ಞಾಪನ (1) ರಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯಕ್ಕೆ ಸೇರಿದ ಎಲ್ಲಾ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳು ತಮ್ಮ ಹಾಗೂ ತಮ್ಮ ಕುಟುಂಬದ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಪ್ರತಿ ವರ್ಷ ಮಾರ್ಚ್ ಅಂತ್ಯಕ್ಕೆ ನಿಗದಿತ ನಮೂನೆಯಲ್ಲಿ ಸಲ್ಲಿಸುವಂತೆ ಸೂಚಿಲಾಗಿದೆ.

ಮೇಲೆ ಓದಲಾದ ಸಂಖ್ಯೆ (2) ರಲ್ಲಿ ದಿನಾಂಕ 03.12.2025 ರ ಸಭಾ ನಡವಳಿಗಳಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯದ ಅಧಿಕಾರಿ / ಸಿಬ್ಬಂದಿಗಳ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯನ್ನು ಆನ್‌ಲೈನ್ ಮೂಲಕ ದಾಖಲಿಸಲು ಅನುಕೂಲವಾಗುವಂತೆ All India Service (AIS) ಅಧಿಕಾರಿಗಳ e-PAR Application Window ನಲ್ಲಿ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಿರುವ ಮಾದರಿಯಲ್ಲಿಯೇ, ಕರ್ನಾಟಕ ಸರ್ಕಾರ ಸಚಿವಾಲಯದ ಅಧಿಕಾರಿ / ಸಿಬ್ಬಂದಿಗಳಿಗೂ ಸಹ e-PAR Application Window ನಲ್ಲಿ ಆಸ್ತಿ ಮತ್ತು ಹೊಣೆಗಾರಿಕೆಯ ವಿವರಗಳನ್ನು Upload ಮಾಡಲು ಒಂದು Module ಅನ್ನು ಸಿದ್ಧಪಡಿಸುವಂತೆ NIC ಅಧಿಕಾರಿಗಳಿಗೆ ಸೂಚಿಸಲಾಗಿತ್ತು.

ಮೇಲೆ ಓದಲಾದ ಅನಧಿಕೃತ ಟಿಪ್ಪಣಿ (3) ರಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯದ ಅಧಿಕಾರಿ/ ನೌಕರರ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 11 ಸೇನಿಸಿ 92, ದಿನಾಂಕ:26.04.1994 ರಲ್ಲಿ ನಿಗದಿಪಡಿಸಿದ ನಮೂನೆಯಂತೆಯೇ ಆನ್‌ಲೈನ್ ಮೂಲಕ ದಾಖಲಿಸಲು e-PAR Platform ನಲ್ಲಿ ಅಭಿವೃದ್ಧಿಪಡಿಸಿ ಅಳವಡಿಸಲು ಕೋರಲಾಗಿದೆ.

ಮೇಲೆ ಓದಲಾದ ಹಿಂಬರಹ (4) ರಲ್ಲಿ ಸಚಿವಾಲಯದ ಅಧಿಕಾರಿ/ನೌಕರರ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸುವ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಸಹಮತಿ ನೀಡಿರುತ್ತದೆ.

ಮೇಲೆ ಓದಲಾದ ಅ.ಸ.ಪತ್ರ (5) ರಲ್ಲಿ ಕಂದಾಯ ಇಲಾಖೆಯ ಗ್ರೇಡ್-1 ಮತ್ತು ಗ್ರೇಡ್-2 ತಹಶೀಲ್ದಾರರ ಆಸ್ತಿ ಮತ್ತು ಹೊಣೆಗಾರಿಕೆಯನ್ನು ಆನ್‌ಲೈನ್ ಮುಖಾಂತರವೇ ದಾಖಲಿಸಲು, ಸದರಿ ಮಾಹಿತಿಗಳನ್ನು ಅಪ್‌ಲೋಡ್ ಮಾಡುವ ಸಂಬಂಧ ಆನ್‌ಲೈನ್‌ನಲ್ಲಿ ಎಲ್ಲಾ ಅಧಿಕಾರಿಗಳನ್ನು Mapping ಮಾಡಲು ಕ್ರಮಕ್ಕೈಗೊಳ್ಳುವಂತೆ ಕೋರಲಾಗಿದೆ.

...2

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳು ಇನ್ನು ಮುಂದೆ ಕಡ್ಡಾಯವಾಗಿ ಸ್ಥಿರಾಸ್ತಿ ಮತ್ತು ಚರಾಸ್ತಿ ವಿವರಗಳನ್ನು ಕರ್ನಾಟಕ e-PAR Application ನಲ್ಲಿನ IPR module ನಲ್ಲಿಯೇ ಆನ್‌ಲೈನ್ ಮೂಲಕ ದಾಖಲಿಸುವಂತೆ ಸೂಚಿಸುವ ಸಂಬಂಧ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ (ಆಸು) 185 ಕತವ 2025,**
**ಬೆಂಗಳೂರು, ದಿನಾಂಕ: 05 ನೇ ಆಗಸ್ಟ್ 2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಎಲ್ಲಾ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳು ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ದಾಖಲಿಸುವ ಸಲುವಾಗಿ, ಕರ್ನಾಟಕ e-PAR Application ನಲ್ಲಿ IPR module ಅನ್ನು ದಿನಾಂಕ:20.08.2026 ರಿಂದ ಜಾರಿಗೆ ತರುತ್ತಾ, 2025-26ನೇ ಸಾಲಿನ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ದಿನಾಂಕ:20.08.2026 ರಿಂದ ಹಾಗೂ ಮುಂದಿನ ವರ್ಷದ ಪ್ರತಿ ಮಾರ್ಚ್ ಅಂತ್ಯಕ್ಕೆ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಸದರಿ ಮಾಡ್ಯೂಲ್‌ನಲ್ಲಿಯೇ ದಾಖಲಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Vimalakshi 05/08/2026

**(ವಿಮಲಾಕ್ಷಿ.ಬಿ)**
ಸರ್ಕಾರದ ಅಧೀನ ಕಾರ್ಯದರ್ಶಿ
ಪ್ರಜಾಸೇವಾ ಇಲಾಖೆ
(ತಪಾಸಣೆ ಮತ್ತು ಸ್ವೀಮರ).

**ಇವರಿಗೆ:**

1. ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ /ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಕಲಬುರಗಿ/ಬೆಳಗಾವಿ ವಿಭಾಗ.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
6. ಶಾಖಾ ರಕ್ಷಾಕಡತ/ ಹೆಚ್ಚುವರಿ ಪ್ರತಿ.

**ಪ್ರತಿಮಾಹಿತಿಗಾಗಿ**:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ವಿಶೇಷಾಧಿಕಾರಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿ ಕಟ್ಟಡ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಜಾಸೇವಾ ಇಲಾಖೆ ಬಹುಮಹಡಿ ಕಟ್ಟಡ.
4. ಸರ್ಕಾರದ ಉಪ ಕಾರ್ಯದರ್ಶಿ, ಪ್ರಜಾಸೇವಾ ಇಲಾಖೆ. ಬಹುಮಹಡಿ ಕಟ್ಟಡ.
5. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿ ಕಟ್ಟಡ.